# ಮಧ್ಯಾಹ್ನದ ವೇಳೆ ಫಲಿತಾಂಶ ಸಾಧ್ಯತೆ

## 152 ಟೇಬಲ್‌ಗಳಲ್ಲಿ ಮತ ಎಣಿಕೆ | ಎಣಿಕೆ ಕೇಂದ್ರಕ್ಕೆ ಅರೆ ಸೇನಾ ಪಡೆ, ಪೊಲೀಸರಿಂದ ಬಿಗು ಭದ್ರತೆ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಎಂಟು ವಿಧಾನ ಸಭಾ ಕ್ಷೇತ್ರಗಳ ಮತ ಎಣಿಕೆ ಶನಿವಾರ (ಇಂದು) ಪೂರ್ವಾಹ್ನ 8 ಗಂಟೆಗೆ ಸುರತ್ಕಲ್‌ನ ರಾಷ್ಟ್ರೀಯ ತಾಂತ್ರಿಕ ಸಂಸ್ಥೆಯಲ್ಲಿ (ಎನ್‌ಐಟಿಕೆ) ನಡೆಯಲಿದೆ. ಮೊದಲಿಗೆ ಅಂಚೆ ಮತಗಳು ಮತ್ತು ಹಿರಿಯ ನಾಗರಿಕರು-ವಿಕಲ ಚೇತನರ ಮತಪತ್ರಗಳನ್ನು ಎಣಿಕೆ ಮಾಡಲಾಗುವುದು. 8.30ಕ್ಕೆ ಇವಿಎಂಗಳ ಮತಗಳ ಎಣಿಕೆ ಆರಂಭಿಸಲಾಗುವುದು. ಮಧ್ಯಾಹ್ನದ ವೇಳೆ ಫಲಿತಾಂಶ ಪ್ರಕಟಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ರವಿಕುಮಾರ್ ಎಂ.ಆರ್. ತಿಳಿಸಿದ್ದಾರೆ.

ಅವರು ಶುಕ್ರವಾರ ಮತ ಎಣಿಕೆ ಕೇಂದ್ರವಾದ ಎನ್‌ಐಟಿಕೆ ಸುರತ್ಕಲ್‌ನಲ್ಲಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮತ ಎಣಿಕೆಗೆ ಕೈಗೊಂಡಿರುವ ಸಿದ್ಧತೆಗಳನ್ನು ವಿವರಿಸಿದರು.

**152 ಎಣಿಕೆ ಟೇಬಲ್‌ಗಳು:** ಪ್ರತಿಯೊಂದು ಕ್ಷೇತ್ರದ ವಿಎಂಗಳ ಮತ ಎಣಿಕೆಗಾಗಿ ತಲಾ 14 ಟೇಬಲ್‌ಗಳನ್ನು ಜೋಡಿಸಲಾಗಿದೆ. ಹಿರಿಯರ ಮತಪತ್ರ ಮತ್ತು ಅಂಚೆ ಮತಪತ್ರಗಳ ಎಣಿಕೆಗಾಗಿ ತಲಾ 5 ಟೇಬಲ್‌ಗಳಿರುತ್ತವೆ. ಮತಪತ್ರ ಮತ್ತು ಅಂಚೆ ಮತಗಳ ಎಣಿಕೆಯ ಪ್ರತಿಯೊಂದು ಟೇಬಲ್‌ಗೆ ಒಬ್ಬ ಸಹಾಯಕ ಚುನಾವಣಾಧಿಕಾರಿಯನ್ನು ನೇಮಕ ಮಾಡಲು ಚುನಾವಣಾ ಆಯೋಗ ಸೂಚಿಸಿದೆ ಎಂದವರು ಹೇಳಿದರು.



ದ.ಕ. ಜಿಲ್ಲಾಧಿಕಾರಿ ರವಿಕುಮಾರ್ ಮತ ಎಣಿಕೆ ಕುರಿತು ಮಾಹಿತಿ ನೀಡಿದರು

ಇವಿಎಂಗಳ ಪ್ರತಿ ಟೇಬಲ್‌ಗೆ ಮೂವರು ಎಣಿಕೆ ಸಿಬ್ಬಂದಿ ಇರುತ್ತಾರೆ. ಮತಪತ್ರ-ಅಂಚೆ ಮತಪತ್ರಗಳ ಎಣಿಕೆ ಟೇಬಲ್‌ಗೆ ಸಹಾಯಕ ಚುನಾವಣಾಧಿಕಾರಿ ಸಹಿತ ನಾಲ್ಕು ಸಿಬ್ಬಂದಿ ಇರುತ್ತಾರೆ. ಒಟ್ಟು 544 ಸಿಬ್ಬಂದಿಯನ್ನು ಮತ ಎಣಿಕೆಗಾಗಿ ನಿಯೋಜಿಸಲಾಗಿದೆ. ಎಲ್ಲಾ ಎಣಿಕೆ ಟೇಬಲ್‌ಗಳಿಗೆ ಸಿಸಿಟಿವಿಗಳನ್ನು ಅಳವಡಿಸಲಾಗಿದೆ. ಎಣಿಕೆ ಕಾರ್ಯವನ್ನು ರಾಜ್ಯ ಮತ್ತು ಕೇಂದ್ರ ಮುಖ್ಯ ಚುನಾವಣಾಧಿಕಾರಿಗಳ ಸಹಿತ ಆಯೋಗದ ಕಚೇರಿಯ ಅಧಿಕಾರಿಗಳು ವೀಕ್ಷಿಸಬಹುದಾಗಿದೆ ಎಂದು ರವಿಕುಮಾರ್ ವಿವರಿಸಿದರು.

**ಭದ್ರತೆ:** ಇವಿಎಂ ಮತ್ತು ವಿವಿಪ್ಯಾಟ್‌ಗಳ ಭದ್ರತಾ ಕೊಠಡಿಗಳು ಇರುವ ಮತ ಎಣಿಕೆ ಕೇಂದ್ರದ ನೂರು ಮೀಟರ್ ಸುತ್ತಳತೆಯಲ್ಲಿ ಅನಧಿಕೃತ ವ್ಯಕ್ತಿಗಳು, ವಾಹನಗಳು ಪ್ರವೇಶಿದಂತೆ ಭದ್ರತಾ ವಲಯ ನಿರ್ಮಿಸಲಾಗಿದೆ. ಮತ ಎಣಿಕೆ ಕೇಂದ್ರದ ಪ್ರವೇಶ ದ್ವಾರದ ಬಳಿ ಭದ್ರತಾ ಸಿಬ್ಬಂದಿ ಗುರುತಿನ ಚೀಟಿಯನ್ನು ಪರಿಶೀಲಿಸಿ ಅನುಮತಿಸಿದ ಬಳಿಕ ಒಳಗೆ ಪ್ರವೇಶಿಸಲು ಅವಕಾಶ ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ರವಿಕುಮಾರ್ ಹೇಳಿದರು.

2ನೇ ಹಂತದ ಭದ್ರತೆಯಲ್ಲಿ ಮತ ಎಣಿಕೆ ಆವರಣದ ಮಧ್ಯೆ ಗೇಟು ನಿರ್ಮಿಸಿ ಭದ್ರತೆಗಾಗಿ ಕೆಎಸ್‌ಆರ್‌ಪಿಯನ್ನು ನಿಯೋಜನೆ ಮಾಡಲಾಗಿದೆ. 3ನೇ ಹಂತದ ಭದ್ರತೆಗೆ ಕೇಂದ್ರ ಶಸ್ತ್ರಸಜ್ಜಿತ ಭದ್ರತಾ ಪಡೆಯನ್ನು ನಿಯೋಜನೆ ಮಾಡಲಾಗಿದೆ. 304 ಹೆಡ್ ಕಾನ್‌ಸ್ಟೇಬಲ್, 39 ಎಎಸ್‌ಐ, 35 ಎಸ್‌ಐ, 14 ಇನ್‌ಸ್ಪೆಕ್ಟರ್‌ಗಳು, 6 ಪೊಲೀಸ್ ಉಪಾಧೀಕ್ಷಕರು, ಇಬ್ಬರು ಡಿಸಿಪಿಗಳು ಇರುತ್ತಾರೆ. ಪೊಲೀಸ್ ಆಯುಕ್ತರು ಮತ್ತು ಎಸ್ಪಿ ಭದ್ರತೆಯ ಮೇಲ್ವಿಚಾರಣೆ ಮಾಡಲಿದ್ದಾರೆ ಎಂದು ಅವರು ನುಡಿದರು.

**ಮದ್ಯ ಮಾರಾಟ ನಿಷೇಧ:** ಶುಕ್ರವಾರ ರಾತ್ರಿ 12 ಗಂಟೆಯಿಂದ ಶನಿವಾರ ರಾತ್ರಿ 12 ಗಂಟೆಯ ತನಕ ಜಿಲ್ಲೆಯಲ್ಲಿ ಮದ್ಯ ಮಾರಾಟವನ್ನು ನಿಷೇಧಿಸಿ ಆದೇಶ ಹೊರಡಿಸಲಾಗಿದೆ. ಅದೇ ರೀತಿ ಶನಿವಾರ ಬೆಳಿಗ್ಗೆ 5 ಗಂಟೆಯಿಂದ ರಾತ್ರಿ 12 ಗಂಟೆ ತನಕ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವುದಕ್ಕಾಗಿ ಸೆಕ್ಷನ್ 144ರ ಅನ್ವಯ ನಿಷೇದಾಜ್ಞೆ ಹೊರಡಿಸಲಾಗಿದೆ. ಈ ಅವಧಿಯಲ್ಲಿ ಗುಂಪು ಸೇರುವುದು, ವಿಜಯೋತ್ಸವ ಮಾಡುವುದು ಮತ್ತು ಮೆರವಣಿಗೆ ನಡೆಸುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ರವಿಕುಮಾರ್ ಎಂ.ಆರ್ ಸ್ಪಷ್ಟಪಡಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಕುಮಾರ್, ಮಂಗಳೂರು ಮನಪಾ ಆಯುಕ್ತ ಚೆನ್ನಬಸಪ್ಪ ಹಾಗೂ ಅಪರ ಜಿಲ್ಲಾಧಿಕಾರಿ ಕೃಷ್ಣಮೂರ್ತಿ ಉಪಸ್ಥಿತರಿದ್ದರು.

### 18 ಸುತ್ತುಗಳು

ಪ್ರತಿಯೊಂದು ಕ್ಷೇತ್ರದ ಮತ ಎಣಿಕೆ 16ರಿಂದ 18 ಸುತ್ತುಗಳಲ್ಲಿ ಮುಕ್ತಾಯಗೊಳ್ಳಲಿದೆ. ಮತಪತ್ರಗಳ ಎಣಿಕೆ ಪ್ರಗತಿಯಲ್ಲಿ ಇರುವಾಗಲೇ ಇವಿಎಂಗಳ ಮತ ಎಣಿಕೆಯನ್ನು ಪೂರ್ಣಗೊಳಿಸಲು ಆಯೋಗ ಸಮ್ಮತಿಸಿದೆ. ಎಣಿಕೆ ಸಿಬ್ಬಂದಿ ಮತ್ತು ಏಜೆಂಟ್‌ಗಳು ಬೆಳಿಗ್ಗೆ 7 ಗಂಟೆಯೊಳಗೆ ಮತ ಎಣಿಕೆ ಕೇಂದ್ರದಲ್ಲಿ ಹಾಜರಿರಬೇಕು. ಅಭ್ಯರ್ಥಿ ಅಥವಾ ಆತನ ಏಜೆಂಟ್‌ಗೆ ಚುನಾವಣಾಧಿಕಾರಿಗಳ ಆಸನದ ಪಕ್ಕದಲ್ಲಿ ಕುಳಿತುಕೊಳ್ಳಲು ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

### ಪ್ರವೇಶ ನಿರ್ಬಂಧ

ಮತ ಎಣಿಕೆ ಸಿಬ್ಬಂದಿ, ಭದ್ರತಾ ಸಿಬ್ಬಂದಿ, ಚುನಾ ವಣಾಧಿಕಾರಿಗಳು, ಅಭ್ಯರ್ಥಿಗಳು, ಅಧಿಕೃತ ಏಜೆಂಟರು, ಚುನಾ ವಣಾ ಆಯೋಗದಿಂದ ಪಾಸ್ ಪಡೆದಿರುವ ಮಾಧ್ಯಮ ಪ್ರತಿನಿಧಿಗಳಿಗೆ ಮಾತ್ರ ಮತ ಎಣಿಕೆ ಕೇಂದ್ರಕ್ಕೆ ಪ್ರವೇಶ ಇರುತ್ತದೆ. ಚುನಾವಣಾಧಿಕಾರಿಗಳು, ಸಹಾಯಕ ಚುನಾವಣಾಧಿಕಾರಿಗಳು ಮತ್ತು ಮಾಧ್ಯಮದ ಪ್ರತಿನಿಧಿಗಳು ಮತ ಎಣಿಕೆ ಕೇಂದ್ರಕ್ಕೆ ಮೊಬೈಲ್ ಫೋನುಗಳನ್ನು ಒಯ್ಯುಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

Hosa Digantha, Date:13/05/23, p, no-03